ಕರ್ನಾಟಕ ಸರ್ಕಾರ

ಮೇ 16, 2017

# ನಗರದಲ್ಲಿ 115.33 ಕೋಟಿ ರೂ ವೆಚ್ಚದಲ್ಲಿ ನಿರ್ಮಿಸಿರುವ ನವೀಕೃತ ರಸ್ತೆಗಳ ಲೋಕಾರ್ಪಣೆ, ಯುದ್ಧ ಸ್ಮಾರಕ ಉದ್ಘಾಟನೆ



**ಬೆಂಗಳೂರು, ಮೇ 16:**

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಮುಖ್ಯಮಂತ್ರಿಗಳ ನಗರೋತ್ಥಾನ ಯೋಜನೆಯಡಿ ನಿರ್ಮಿಸಲಾದ ನಗರದಲ್ಲಿನ ನವೀಕೃತ ನೃಪತುಂಗ ರಸ್ತೆ ಹಾಗೂ 115.33 ಕೋಟಿ ರೂ. ವೆಚ್ಚದಲ್ಲಿ ನವೀಕೃತಗೊಂಡಿರುವ 9.19 ಕಿ.ಮೀ ರೆಸಿಡೆನ್ಸಿ ರಸ್ತೆ, ರಿಚ್ಮಂಡ್ ರಸ್ತೆ, ಕಮಿಷರೇಟ್ ರಸ್ತೆ ಮತ್ತು ಮ್ಯೂಸಿಯಂ ರಸ್ತೆಗಳನ್ನು ಲೋಕಾರ್ಪಣೆ ಮಾಡಿದರಲ್ಲದೆ, ಬ್ರಿಗೇಡ್ ರಸ್ತೆ ಹಾಗೂ ರೆಸಿಡೆನ್ಸಿ ರಸ್ತೆಯ ಜಂಕ್ಷನ್ ಬಳಿ ನಿರ್ಮಿಸಿರುವ ಯುದ್ಧ ಸ್ಮಾರಕವನ್ನು ಇಲ್ಲಿ ಇಂದು ಉದ್ಘಾಟಿಸಿದರು.

ಬೆಂಗಳೂರು ನಗರದ 50 ವಿವಿಧ ರಸ್ತೆಗಳನ್ನು ನಾಲ್ಕು ಹಂತಗಳಲ್ಲಿ 700 ಕೋಟಿ ರೂ ವೆಚ್ಚದಲ್ಲಿ ಟೆಂಡರ್ ಶ್ಯೂರ್ ಮಾದರಿಯಲ್ಲಿ ಅತ್ಯುತ್ತಮ ರೀತಿಯಲ್ಲಿ ಸಿದ್ಧಪಡಿಸಿ ಸಂಚಾರ–ಮುಕ್ತ ಮಾಡಲಾಗುತ್ತದೆ. ನಗರದ ಮೂಲಭೂತ ಸೌಕರ್ಯ ಅಭಿವೃದ್ಧಿಪಡಿಸಲು 7300 ಕೋಟಿ ರೂ ಗಳನ್ನು ವೆಚ್ಚ ಮಾಡುವ ಮೂಲಕ ರಾಜ್ಯದ ರಾಜಧಾನಿಗೆ ಹೊಸ ರೂಪ ನೀಡಲಾಗುತ್ತಿದೆ. ರಸ್ತೆ ನಿರ್ಮಾಣ, ಉತ್ತಮ ಗುಣಮಟ್ಟ ಹಾಗೂ ದೀರ್ಘಬಾಳಿಕೆ ಬರುವಂತೆ ನಿರ್ಮಿಸಲಾಗುತ್ತಿದೆ. ಬೆಂಗಳೂರು ನಗರ ಜನಸಂಖ್ಯೆ ಕಳೆದ ಇಪ್ಪತ್ತು ವರ್ಷಗಳಲ್ಲಿ ತೀವ್ರ ಗತಿಯಲ್ಲಿ ಏರಿಕೆಯಾಗುತ್ತಿದೆ. ಬಡ ಜನರ ಅನುಕೂಲಕ್ಕಾಗಿ ಬೆಂಗಳೂರು ನಗರದ ಎಲ್ಲಾ 198 ವಾರ್ಡ್‌ಗಳಲ್ಲಿ ಆಗಸ್ಟ್ 15 ರಿಂದ 198 ಇಂದಿರಾ ಕ್ಯಾಂಟೀನ್ ಆರಂಭಿಸಲಾಗುತ್ತದೆ.

ಬೆಂಗಳೂರು ನಗರದಲ್ಲಿ ದಿನ ನಿತ್ಯ ಉತ್ಪನ್ನವಾಗುವ 4000 ಟನ್ ತ್ಯಾಜ್ಯ ವಿಲೇವಾರಿಗೆ ಅಗತ್ಯ ಕ್ರಮ ಕೈಗೊಳ್ಳಲಾಗುತ್ತಿದೆ ಎಂದು ಮುಖ್ಯಮಂತ್ರಿ ತಿಳಿಸಿದರು.

ಇದೇ ಸಂದರ್ಭದಲ್ಲಿ ಬ್ರಿಗೇಡ್ ರಸ್ತೆ ಮತ್ತು ರೆಸಿಡೆನ್ಸಿ ರಸ್ತೆಯ ಕೂಡು ರಸ್ತೆಯ ಬಳಿ ಯುದ್ಧ ಸ್ಮಾರಕವನ್ನು ಉದ್ಘಾಟಿಸಿದ ಸಿದ್ದರಾಮಯ್ಯ ಅವರು ರಾಷ್ಟ್ರ ರಕ್ಷಣೆ ಮಾಡುವ ವೀರ ಯೋಧರು, ಎಲ್ಲರಿಗೂ ಅನ್ನ ಕೊಡುವ ರೈತರು ಹಾಗೂ ಬೆವರು ಸುರಿಸಿ ರಾಷ್ಟ್ರದ ಅಭಿವೃದ್ಧಿಗಾಗಿ ಶ್ರಮಿಸುವ ಕಾರ್ಮಿಕರ ಬಗ್ಗೆ ತಮಗೆ ಅಪಾರ ಗೌರವವಿದೆ. ರಾಷ್ಟ್ರದ ರಕ್ಷಣೆಗೆ ಪ್ರಾಣ ತೆತ್ತ ವೀರ ಯೋಧರ ಕುಟುಂಬಗಳ ಹಿತ ರಕ್ಷಣೆಗೆ ರಾಜ್ಯ ಸರ್ಕಾರ ಬದ್ಧವಾಗಿದೆ. ರಾಷ್ಟ್ರ ರಕ್ಷಣೆಯ ಸಂದರ್ಭದಲ್ಲಿ ಮೃತಪಟ್ಟ ವೀರ ಯೋಧರ ಕುಟುಂಬಗಳಿಗೆ ಅಗತ್ಯ ಪರಿಹಾರ ಒದಗಿಸಲಾಗುತ್ತಿದೆ ಎಂದು ಸಿದ್ದರಾಮಯ್ಯ ಅವರು ಹೇಳಿದರು.

ಬೆಂಗಳೂರು ಅಭಿವೃದ್ಧಿ ಹಾಗೂ ನಗರ ಯೋಜನಾ ಸಚಿವರೂ ಆದ ಬೆಂಗಳೂರು ಜಿಲ್ಲಾ ಉಸ್ತುವಾರಿ ಸಚಿವ ಕೆ. ಜೆ. ಜಾರ್ಜ್, ನಗರಾಭಿವೃದ್ಧಿ ಮತ್ತು ಹಜ್ ಸಚಿವ ಆರ್. ರೋಷನ್ ಬೇಗ್, ಸಾರಿಗೆ ಸಚಿವ ರಾಮಲಿಂಗಾ ರೆಡ್ಡಿ, ಶಾಸಕರಾದ ಎನ್. ಎ. ಹ್ಯಾರಿಸ್, ಹೆಚ್. ಎಂ. ರೇವಣ್ಣ, ಬೆಂಗಳೂರಿನ ಮಹಾಪೌರರಾದ ಶ್ರೀಮತಿ ಜಿ. ಪದ್ಮಾವತಿ, ನಗರಾಭಿವೃದ್ಧಿ ಇಲಾಖೆಯ ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ ಮಹೇಂದ್ರ ಜೈನ್, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಆಯುಕ್ತ ಮಂಜುನಾಥ ಪ್ರಸಾದ್ ಅವರೂ ಈ ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದರು.

## ಮೌಢ್ಯ ನಿಷೇಧ ಕಾಯಿದೆ : ಸಂಪುಟ ಉಪಸಮಿತಿಯ ವರದಿ ನಂತರ ತೀರ್ಮಾನ



ರಾಜ್ಯದಲ್ಲಿ ಮೌಢ್ಯ ನಿಷೇಧ ಕಾನೂನು ಜಾರಿಗೆ ತರುವಲ್ಲಿ ಪ್ರಗತಿಪರ ಮಠಾಧೀಶರ ವೇದಿಕೆಯ ನಿಯೋಗ ಇಂದು ತಮಗೆ ನೀಡಿದ ಮನವಿ ಕುರಿತಂತೆ ತಮ್ಮ ಗೃಹ ಕಚೇರಿ ಕೃಷ್ಣಾದಲ್ಲಿ

ಪ್ರತಿಕ್ರಿಯಿಸಿದ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಈ ಬಗ್ಗೆ ಸಚಿವ ಸಂಪುಟ ಉಪ ಸಮಿತಿ ರಚಿಸಲಾಗಿದೆ. ಸಮಿತಿಯ ವರದಿ ಬಂದ ನಂತರ ಪರಿಶೀಲಿಸಿ ಸೂಕ್ತ ತೀರ್ಮಾನ ಕೈಗೊಳ್ಳುವುದಾಗಿ ತಿಳಿಸಿದರು.

## ಡಾ ಪಾರ್ವತಮ್ಮ ಆರೋಗ್ಯ ವಿಚಾರಣೆ



ಈ ಮುನ್ನ, ಅನಾರೋಗ್ಯದ ಹಿನ್ನೆಲೆಯಲ್ಲಿ ನಗರದ ಎಂ ಎಸ್ ರಾಮಯ್ಯ ಆಸ್ಪತ್ರೆಗೆ ದಾಖಲಾಗಿರುವ ಡಾ ಪಾರ್ವತಮ್ಮ ರಾಜ್‌ಕುಮಾರ್ ಅವರನ್ನು ಭೇಟಿ ಮಾಡಿದ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಅವರ ಆರೋಗ್ಯ ವಿಚಾರಿಸಿ ಶೀಘ್ರ ಗುಣಮುಖರಾಗುವಂತೆ ಹಾರೈಸಿದರು.

ಡಾ ಪಾರ್ವತಮ್ಮ ಅವರು ಸಾಮಾನ್ಯ ತಪಾಸಣೆಗೆ ಒಳಗಾಗಿದ್ದಾರೆ. ಚಿಕಿತ್ಸೆಗೆ ಸ್ಪಂದಿಸುತ್ತಿದ್ದಾರೆ. ಚೇತರಿಸಿಕೊಳ್ಳುತ್ತಿದ್ದಾರೆ ಎಂದು ಆಸ್ಪತ್ರೆ ಹಾಗೂ ಕುಟುಂಬ ಮೂಲಗಳು ತಿಳಿಸಿವೆ ಎಂದು ಸಿದ್ದರಾಮಯ್ಯ ಅವರು ಮಾಹಿತಿ ನೀಡಿದರು.

ಬಡೇರಿಯಾ ಬಂಧನ

ಅಂದಿನ ಲೋಕಾಯುಕ್ತ ನ್ಯಾಯಮೂರ್ತಿ ಎನ್ ಸಂತೋಷ್ ಹೆಗಡೆ ಅವರ ವರದಿ ಆಧರಿಸಿ ಕೇಂದ್ರ ಸರ್ಕಾರದ ವಿಶೇಷ ತನಿಖಾ ದಳ ಹಿರಿಯ ಐ ಎ ಎಸ್ ಅಧಿಕಾರಿ ಗಂಗಾರಾಮ್ ಬಡೇರಿಯಾ ಅವರನ್ನು ಬಂಧಿಸಿದೆ. ಕಾನೂನು ತನ್ನ ಕ್ರಮ ಜರುಗಿಸಲಿದೆ ಎಂದು ಮಾಧ್ಯಮ ಪ್ರತಿನಿಧಿಯೊಬ್ಬರ ಪ್ರಶ್ನೆಗೆ ಮುಖ್ಯಮಂತ್ರಿ ಉತ್ತರಿಸಿದರು.

*************

ಡಿ ಪಿ ಎಂ : ಟಿ ಸಿ ಎಂ ಬಿ